ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	12
ಸದಸ್ಯರ ಹೆಸರು	:	ಶ್ರೀ ಯು.ಬಿ.ವೆಂಕಟೇಶ (ನಾಮನಿರ್ದೇಶನ ಹೊಂದಿದವರು)
ಉತ್ತರಿಸ ಬೇಕಾದ ದಿನಾಂಕ	:	24.09.2020
ಉತ್ತರಿಸಬೇಕಾದ ಸಚಿವರು	:	ಮಾನ್ಯ ಮುಖ್ಯಮಂತ್ರಿಯವರು.

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	'ಜಿ' ಕೆಟಗಿರಿ ನಿವೇಶನಗಳನ್ನು ಕಾನೂನು ಬಾಹಿರವಾಗಿ ನೋಂದಣಿ ಮಾಡಿಕೊಟ್ಟಿರುವ ಆರೋಪದ ಹಿನ್ನಲೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಎಷ್ಟು ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಕೈಗೊಂಡಿದೆ;	ಪ್ರಾಧಿಕಾರದಲ್ಲಿ 'ಜಿ' ಕೆಟಗಿರಿ ನಿವೇಶನಗಳನ್ನು ಕಾನೂನು ಬಾಹಿರವಾಗಿ ನೋಂದಣಿ ಮಾಡಿಕೊಟ್ಟಿರುವ ಆರೋಪದ ಹಿನ್ನಲೆಯಲ್ಲಿ ಇಬ್ಬರು ನೌಕರರುಗಳ ವಿರುದ್ಧ ಶಿಸ್ತಿನ ಕ್ರಮಕೈಗೊಳ್ಳಲಾಗಿರುತ್ತದೆ.
(ಆ)	ಕೈಗೊಂಡಿದ್ದಲ್ಲಿ ಕಳೆದ ಮೂರು ವರ್ಷಗಳಲ್ಲಿ ಶಿಸ್ತುಕ್ರಮಕ್ಕೆ ಒಳಗಾಗಿರುವ ಅಧಿಕಾರಿಗಳ ಹೆಸರು ಮತ್ತು ಆರೋಪದ ವಿವರಗಳನ್ನು ನೀಡುವುದು.	1. ಶ್ರೀ ಅಶ್ವಥ್ ನಾರಾಯಣ ರಾವ್.ಡಿ, ಮೇಲ್ವಿಚಾರಕರು, ಹಾಗೂ 2. ಶ್ರೀ ಎಸ್.ಮಂಜುನಾಥ್, ಪ್ರ.ದ.ಸ. **ಆರೋಪದ ವಿವರ:-** ಬೆಂಗಳೂರು ಅಭಿವೃದ್ಧಿ ಪ್ರಾಧಿಕಾ (ನಿವೇಶನಗಳ ಹಂಚಿಕೆ) ನಿಯಮಾವಳಿ-1984 ನಿಯಮ 6 ಮತ್ತು 14 (1) ರಂತೆ ಗುತ್ತಿಗೆ ಹಾಗೂ ಮಾರಾಟ ಒಪ್ಪಂದ ಪತ್ರವನ್ನು ನೊಂದಾಯಿಸಬೇಕಾಗಿರುತ್ತದೆ. ಹೀಗಿದ್ದರೂ ಕೂಡ ಸರ್ಕಾರದ ಪೂರ್ವಾನುಮತಿಯಿಲ್ಲದೆ ಹಾಗೂ ಮೇಲಾಧಿಕಾರಿಗಳ ಅನುಮೋದನೆ ಪಡೆಯದೇ ನೇರವಾಗಿ ಶುದ್ಧಕ್ರಯ ಪತ್ರವನ್ನು ಹಂಚಿಕೆದಾರರಿಗೆ ನೊಂದಾಯಿಸಿಕೊಟ್ಟು ಗುತ್ತಿಗೆ ಷರತ್ತುಗಳನ್ನು ಉಲ್ಲಂಘಿಸಿ ಕರ್ತವ್ಯ ಲೋಪ ಎಸಗಿರುತ್ತಾರೆ.

ಸಂ: ನಅಇ 64 ಬೆಂಭೂಸ್ವಾ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ